ದಿನಾಂಕ : 25.02.2022 -6- ಓಎಸ್ ನಂ. 121/2017 ರಲ್ಲಿ
ಡಿಡಬ್ಲ್ಯೂ-1(ವಿಜಯಗೋಪಾಲ್ ಆರ್ ವಿ)

ಸಾಕ್ಷಿಗೆ ಕ್ರಮಬದ್ದವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಪ್ರತಿವಾದಿ ಪರ ವಕೀಲರಿಂದಃ-

1. ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

2. 2011-12 ನೇ ಸಾಲಿನಲ್ಲಿ ಮಾಗಡಿ ತಾಲ್ಲೂಕಿನಲ್ಲಿ ನಡೆದ ಕಾಮಗಾರಿಗಳಿಗೆ ಬಿಲ್ಲು ಪಾವತಿಸುವುದು, ಟೆಂಡರ್ ಪ್ರಕ್ರಿಯೆ, ಕಾಮಗಾರಿ ಕಾರ್ಯಾದೇಶ ಹಾಗೂ ಕಾಮಗಾರಿ ಅನೋದನೆ ಕ್ರಮಗಳನ್ನು ಯಥಾಸ್ಥಿತಿಯಲ್ಲಿರುವಂತೆ ಮಾಡಿರುವ ಸರ್ಕಾರದ ಆದೇಶದ ದೃಢೀಕೃತ ನಕಲುಗಳನ್ನು ಒಟ್ಟಾರೆಯಾಗಿ ನಿಡಿ-1 ಎಂದು, 2011-12 ನೇ ಸಾಲಿನ ಕಾಮಗಾರಿಗಳ ಅವ್ಯವಹಾರ ಕುರಿತು ವಿವರವಾದ ವರದಿಯನ್ನು ಸಲ್ಲಿಸಲು ಪರೀವಿಕ್ಷಣಾ ತಂಡವನ್ನು ನೇಮಿಸಲಾದ ಆದೇಶದ ಪತ್ರದ ದೃಢೀಕೃತ ನಕಲನ್ನು ನಿಡಿ-2 ಎಂದು, ದಿನಾಂಕ 01.07.2013 ರಂದು ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ 2011-12 ನೇ ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳ ನಿರ್ವಹಣೆಯಲ್ಲಿ ಜರುಗಿರುವ ಅಕ್ರಮಗಳಿಗೆ ಸಂಬಂಧಿಸಿದ ತನಿಖಾ ವರದಿಯಲ್ಲಿ ಪ್ರಸ್ತಾಪಿಸಲಾದ ವಸೂಲಾತಿ ಮೊತ್ತಗಳ ಸಂಬಂಧ ಜರುಗಿದ ಸಭೆಯ ನಡವಳಿಗಳ ಪತ್ರದ ದೃಢೀಕೃತ ನಕಲನ್ನು ನಿಡಿ-3 ಎಂದು, ದಿನಾಂಕ 01.07.2013 ರಂದು ಜರುಗಿದ ಸಭೆಯಂತೆ ಕ್ರಮ ಕೈಗೊಂಡು ವರದಿ ಸಲ್ಲಿಸಲು ಸೂಚಿಸಲಾದ ಸರ್ಕಾರದ ಪತ್ರದ ದೃಢೀಕೃತ ನಕಲನ್ನು ನಿಡಿ-4 ಎಂದು, 2011-2012 ನೇ ಸಾಲಿನಲ್ಲಿ ನಡೆದ ಕಾಮಗಾರಿ ಅವ್ಯವಹಾರ ಕುರಿತಂತೆ ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಡಿ-5 ಎಂದು ಗುರುತಿಸಲಾಯಿತು.

ಪಾಟೀ ಸವಾಲು ವಾದಿ ಪರ ವಕೀಲರಿಂದ

ಹಾಜರಿದ್ದು ಸಮಯ ಕೋರಿದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಎನ್ ಎಸ್ ಕುಲಕರ್ಣಿ)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.